ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು - ೧೫

ಪಟ್ಟಿ - ೫

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತಮೂರನೇ ಅಧಿವೇಶನ

## (ಮುಂದುವರೆದ ಉಪವೇಶನ)

## ಗುರುವಾರ, ದಿನಾಂಕ: ೧೬ನೇ ಮಾರ್ಚ್, ೨೦೧೭

---

### ಸಮೂಹ - IV

೧. ಮುಖ್ಯಮಂತ್ರಿಗಳು

೨. ಗೃಹ ಸಚಿವರು

೩. ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು

೪. ನಗರಾಭಿವೃದ್ಧಿ ಹಾಗೂ ಹಜ್ ಸಚಿವರು

---

### ಮನೋರಂಜನೆ ಕ್ಲಬ್‌ಗಳಿಗೆ ಅನುಮತಿ ನೀಡಿರುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು)**–

೬೧ (೫೨೦) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನಲ್ಲಿರುವ ರಿಕ್ರಿಯೇಷನ್ ಕ್ಲಬ್‌ಗಳ ಸಂಖ್ಯೆ ಎಷ್ಟು ; ಯಾವುವು ; (ವಿಳಾಸ ಸಮೇತ ವಿವರ ನೀಡುವುದು)

(ಆ) ೨೦೦೩ ರಿಂದ ಇಲ್ಲಿಯವರೆಗೆ ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಎಷ್ಟು ಮನೋರಂಜನೆ ಕ್ಲಬ್‌ಗಳಿಗೆ ಅನುಮತಿ ನೀಡಲಾಗಿದೆ ; (ಪೂರ್ಣ ಮಾಹಿತಿ ನೀಡುವುದು)

(ಇ) ಸದರಿ ಕ್ಲಬ್‌ಗಳಲ್ಲಿ ಜೂಜು, ಲೈವ್‌ಬ್ಯಾಂಡ್, ಡಿಸ್ಕೋಥೆಕ್ ನಡೆಸಲು ಅನುಮತಿ ನೀಡಲಾಗಿದೆಯೇ ; ನೀಡಿದ್ದರೆ, ಯಾವ ಆಧಾರದ ಮೇಲೆ ನೀಡಲಾಗಿದೆ ; ಇದಕ್ಕೆ ಅನುಸರಿಸುವ ಮಾನದಂಡವೇನು ;

(ಈ) ರಿಕ್ರಿಯೇಷನ್ ಕ್ಲಬ್‌ಗಳನ್ನು ನಡೆಸಲು ಅನುಮತಿ ನೀಡಲು ಇರುವ ಮಾನದಂಡಗಳೇನು ; ಆ ಕ್ಲಬ್‌ಗಳಲ್ಲಿ ನಡೆಸಬಹುದಾದ ಕಾರ್ಯ ಚಟುವಟಿಕೆಗಳೇನು ? (ವಿವರ ನೀಡುವುದು)

## ರಾಯಚೂರು, ಮಾನ್ವಿ ಪಟ್ಟಣಕ್ಕೆ ಕುಡಿಯುವ ನೀರಿನ ಯೋಜನೆ ಬಗ್ಗೆ

**ಶ್ರೀ ಎನ್. ಎಸ್. ಬೋಸ್‌ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು)–**

೬೨(೫೨೬) ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ನಗರದಲ್ಲಿ KUIDF ವತಿಯಿಂದ ತೆಗೆದುಕೊಂಡ 24X7 ಕುಡಿಯುವ ನೀರಿನ ಯೋಜನೆಯು ಮಂದಗತಿಯಲ್ಲಿ ನಡೆಯುತ್ತಿರುವುದು ಸರಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ನಿಗಧಿತ ಸಮಯದಲ್ಲಿ ಈ ಯೋಜನೆಯನ್ನು ಪೂರೈಸಲು ಸರಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ಮಾನ್ವಿ ಪಟ್ಟಣಕ್ಕೆ ಕುಡಿಯುವ ನೀರಿಗಾಗಿ ಇನ್‌ಪೌಂಡಿಂಗ್ ರಿಸರ್ವಾಯರ್ (ಕೆರೆ) ನಿರ್ಮಾಣ ಮಾಡಲು ಸರಕಾರ ತೆಗೆದುಕೊಂಡ ಕ್ರಮಗಳೇನು ?

## ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) –**

೬೩ (೫೫೮) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದ ಅಡಿಯಲ್ಲಿ ಎಷ್ಟು ಇಲಾಖೆಗಳು ಕಾರ್ಯನಿರ್ವಹಿಸುತ್ತಿವೆ ; (ವಿವರವಾದ ಪಟ್ಟಿ ನೀಡುವುದು)

(ಆ) ಪ್ರತಿಯೊಂದು ಇಲಾಖೆಯಲ್ಲಿ ಎಷ್ಟು ಹುದ್ದೆಗಳನ್ನು ಸೃಷ್ಟಿಸಲಾಗಿದೆ ; ಇಲಾಖಾವಾರು ಹಾಗೂ ಕೇಡರ್ (ಎ.ಬಿ.ಸಿ. ಹಾಗೂ ಡಿ)ವಾರು ವಿವರಣೆ ನೀಡುವುದು )

(ಇ) ಪ್ರತಿ ಇಲಾಖೆಯಲ್ಲಿ ಸದ್ಯ ಕೇಡರ್‌ವಾರು ಖಾಲಿ ಇರುವ ಹುದ್ದೆಗಳೆಷ್ಟು ; (ವಿವರವಾದ ಪಟ್ಟಿ ನೀಡುವುದು)

(ಈ) ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ತುಂಬಿಕೊಳ್ಳಲು ಪ್ರಕ್ರಿಯೆ ನಡೆದಿದೆಯೇ ? (ಇಲಾಖಾವಾರು ವಿವರ ನೀಡುವುದು)

## ಹೈದ್ರಾಬಾದ್–ಕರ್ನಾಟಕ ಭಾಗದ ೬ ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ/ಅರೆಸರ್ಕಾರಿ ಇಲಾಖೆಗಳ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ ) –**

೬೪ (೫೦೯) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹೈದ್ರಾಬಾದ್–ಕರ್ನಾಟಕ ಭಾಗದ ೬ ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ/ಅರೆಸರ್ಕಾರಿ ಇಲಾಖೆಗಳು ಯಾವುವು ; (ಜಿಲ್ಲಾವಾರು, ಇಲಾಖಾವಾರು ಮಾಹಿತಿ ನೀಡುವುದು)

(ಆ) ಹೈದ್ರಾಬಾದ್–ಕರ್ನಾಟಕ ಭಾಗದ ೬ ಜಿಲ್ಲೆಗಳ ಸರ್ಕಾರಿ/ಅರೆಸರ್ಕಾರಿ ಇಲಾಖೆಗಳಲ್ಲಿ ಕಳೆದ ೨೦೧೩–೧೪ನೇ ಸಾಲಿನಿಂದ ಖಾಲಿ ಇರುವ ಹುದ್ದೆಗಳೆಷ್ಟು ; (ಜಿಲ್ಲಾವಾರು, ಇಲಾಖಾವಾರು ಮಾಹಿತಿ ನೀಡುವುದು)

(ಇ) ಹೈದ್ರಾಬಾದ್–ಕರ್ನಾಟಕ ಭಾಗದ ೬ ಜಿಲ್ಲೆಗಳ ಸರ್ಕಾರಿ/ಅರೆಸರ್ಕಾರಿ ಇಲಾಖೆಗಳಲ್ಲಿ ೨೦೧೩–೧೪ನೇ ಸಾಲಿನಿಂದ ಖಾಲಿ ಇರುವ ಹುದ್ದೆಗಳಿಗೆ ನೇಮಕಾತಿ ಮಾಡಲಾಗಿದೆಯೇ ; (ಇದ್ದಲ್ಲಿ, ಜಿಲ್ಲಾವಾರು, ಇಲಾಖಾವಾರು, ಹುದ್ದೆವಾರು ಮಾಹಿತಿ ನೀಡುವುದು)

ಈ) ಹೈದ್ರಾಬಾದ್–ಕರ್ನಾಟಕ ಭಾಗದ ೬ ಜಿಲ್ಲೆಗಳ ಸರ್ಕಾರಿ/ಅರೆಸರ್ಕಾರಿ ಇಲಾಖೆಗಳಲ್ಲಿ ೩೭೧ (ಜೆ) ಅಡಿಯ ಮೀಸಲಾತಿ ಪ್ರಕಾರ ವೃಂದವಾರು, ಹುದ್ದೆವಾರು ಮೀಸಲಾತಿ ಪಟ್ಟಿ ತಯಾರಿಸಲಾಗಿದೆಯೇ ; ಇದ್ದರೆ, ಇಲಾಖಾವಾರು ಪ್ರತ್ಯೇಕವಾಗಿ ಮಾಹಿತಿ ನೀಡುವುದು ;

ಉ) ಸದರಿ ಮೀಸಲಾತಿ ಪ್ರಕಾರ ವೃಂದವಾರು, ಹುದ್ದೆವಾರು ಪಟ್ಟಿ ಸಿದ್ಧಪಡಿಸದೆ ಇದ್ದ ಇಲಾಖೆಗಳು ಯಾವುವು ? (ಸಂಪೂರ್ಣ ಮಾಹಿತಿ ನೀಡುವುದು)

**೩೭೧ (ಜೆ) ಪ್ರಕಾರ ಹುದ್ದೆ ಭರ್ತಿ ಮಾಡುವ ಬಗ್ಗೆ**

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು)** –

ಶ್ರೀ ಎನ್.ಎಸ್. **ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು)** –

೬೫ (೫೦೪+೫೨೩) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಸಂವಿಧಾನದ ಕಲಂ ೩೭೧(ಜೆ) ಪ್ರಕಾರ ಇಲ್ಲಿಯವರೆಗೆ ಭರ್ತಿ ಮಾಡಲಾದ ಹುದ್ದೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ಇಲಾಖಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಸಂವಿಧಾನದ ಕಲಂ ೩೭೧(ಜೆ) ಪ್ರಕಾರ ಗ್ರೂಪ್ ಎ, ಬಿ, ಸಿ, ಡಿ ಹುದ್ದೆಗಳ ನೇಮಕಾತಿಯಲ್ಲಿ ಕಲ್ಪಿಸಿದ ಮೀಸಲಾತಿ ಪ್ರಮಾಣ ಎಷ್ಟು ; (ಮಾಹಿತಿ ನೀಡುವುದು)

(ಇ) ಸದರಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ; ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಹೈದರಾಬಾದ್ ಕರ್ನಾಟಕ ಪ್ರದೇಶದ ೩೭೧(ಜೆ) ಕಲಂ ಪ್ರಕಾರ ಒಟ್ಟು ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿ ವರ್ಗಗಳ ಸಂಖ್ಯೆ ಎಷ್ಟು ; ಇಲ್ಲಿಯವರೆಗೂ ಭರ್ತಿ ಮಾಡಿರುವ ಹುದ್ದೆಗಳೆಷ್ಟು ? (ವಿವರ ನೀಡುವುದು)

## ಮಂಗಳೂರು ಗ್ರಾಮಾಂತರ ಪೋಲೀಸ್ ಠಾಣೆಯನ್ನು ಸ್ಥಳಾಂತರಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) –**

೬೬. (೪೮೨) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮಂಗಳೂರು ಗ್ರಾಮಾಂತರ ಪೋಲೀಸ್ ಠಾಣೆಯು ಅಕ್ಕಿ ಗಿರಣಿ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವುದರಿಂದ ಸದರಿ ಪೋಲೀಸ್ ಠಾಣೆಯನ್ನು ಸ್ಥಳಾಂತರಿಸಲಾಗುವುದೇ ; ಸದನದಲ್ಲಿ ಈ ಕುರಿತು ಭರವಸೆ ನೀಡಿದ್ದರೂ ಅದನ್ನು ಈಡೇರಿಸದೆ ಇರಲು ಕಾರಣಗಳೇನು ; ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ಒದಗಿಸುವುದು)

(ಆ) ನೂತನ ಠಾಣೆಯ ಕಟ್ಟಡದ ಕಾಮಗಾರಿ ಸ್ಥಗಿತಗೊಂಡಿರಲು ಕಾರಣವೇನು ; ಈ ಕಟ್ಟಡಕ್ಕಾಗಿ ವಿನಿಯೋಗಿಸಿದ ಹಣ ಎಷ್ಟು ; ಈ ಕಾಮಗಾರಿಗೆ ಅವಶ್ಯವಿರುವ ಹಣ ಎಷ್ಟು ; ಕಾಮಗಾರಿ ಪ್ರಾರಂಭಗೊಂಡಿದ್ದು ಯಾವಾಗ ;

(ಇ) ಅಕ್ಕಿ ಗಿರಣಿ ಪೋಲೀಸ್ ಠಾಣೆಯನ್ನು ನೂತನ ಕಟ್ಟಡ ನಿರ್ಮಿಸಿ ಸ್ಥಳಾಂತರಗೊಳಿಸಲು ಇಲಾಖೆ ವಿಫಲಗೊಳ್ಳಲು ಕಾರಣಗಳೇನು ? (ವಿವರ ನೀಡುವುದು)

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ಕೆರೆಗಳಲ್ಲಿ ತ್ಯಾಜ್ಯ ಮತ್ತು ರಾಸಾಯನಿಕ ವಸ್ತುಗಳು ಸೇರಿ ಮಲಿನಗೊಳ್ಳುತ್ತಿರುವುದನ್ನು ತಡೆಗಟ್ಟುವ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ ) –**

೬೭ (೫೩೯) ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ಜೀವಂತ ಕೆರೆಗಳ ಸಂಖ್ಯೆ ಎಷ್ಟು ; ಅವು ಯಾವುವು ;

(ಆ) ಇವುಗಳಲ್ಲಿ ತ್ಯಾಜ್ಯ ಮತ್ತು ಇನ್ನಿತರೆ ರಾಸಾಯನಿಕ ವಸ್ತುಗಳಿಂದ ಮಲಿನವಾಗಿರುವ ಮತ್ತು ಮಲಿನವಾಗುತ್ತಿರುವ ಕೆರೆಗಳು ಯಾವುವು ;

(ಇ) ಕಳೆದ ಮೂರು ವರ್ಷಗಳಿಂದ ಯಾವ ಯಾವ ಕೆರೆಗೆ ಎಷ್ಟೆಷ್ಟು ಹಣ ಖರ್ಚು ಮಾಡಲಾಗಿದೆ ;

ಈ) ಯಾವ ಯಾವ ಕೆರೆಗಳ ನಿರ್ವಹಣೆಯನ್ನು ಯಾರಿಗೆ ವಹಿಸಲಾಗಿದೆ ?

## ಜನ ಸ್ನೇಹಿ ಪೊಲೀಸ್ ಠಾಣೆಗಳ ಬಗ್ಗೆ

**ಶ್ರೀ ಭಾನುಪ್ರಕಾಶ (ವಿಧಾನಸಭೆಯಿಂದ ಚುನಾಯಿತರಾದವರು) –**

೬೮ (೫೦೨) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಜನ ಸ್ನೇಹಿ ಪೊಲೀಸ್ ಠಾಣೆಗಳನ್ನು ಸ್ಥಾಪಿಸಲು ಬಿಡುಗಡೆಯಾದ ಹಣವೆಷ್ಟು ಖರ್ಚಾದ ಹಣವೆಷ್ಟು ;

(ಆ) ಇದುವರೆವಿಗೂ ಯಾವ ಯಾವ ಠಾಣೆಗಳಲ್ಲಿ ಸಾರ್ವಜನಿಕರಿಗೆ ಮೂಲ ಸೌಕರ್ಯಗಳನ್ನು ಕಲ್ಪಿಸಲಾಗಿದೆ ; (ವಿವರ ನೀಡುವುದು)

(ಇ) ಠಾಣೆಗಳಲ್ಲಿ ಒದಗಿಸಿರುವ ಮೂಲ ಸೌಕರ್ಯಗಳೇನು ? (ವಿವರಗಳನ್ನು ನೀಡುವುದು)

## ರಾಜ್ಯದಲ್ಲಿ ಕೈಗಾರಿಕಾ ತರಬೇತಿ ಸಂಸ್ಥೆಗಳು, ಸಿಬ್ಬಂದಿ ಕೊರತೆ ಎದುರಿಸುತ್ತಿರುವ ಬಗ್ಗೆ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೬೯ (೫೩೦) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಹೊಸದಾಗಿ ಸೃಜಿಸಿರುವ ಕೈಗಾರಿಕಾ ತರಬೇತಿ ಸಂಸ್ಥೆಗಳು ಸಿಬ್ಬಂದಿಗಳ ಕೊರತೆ ಹಾಗೂ ಮೂಲಭೂತ ಸೌಲಭ್ಯಗಳ ಕೊರತೆಯಿಂದ ಬಳಲುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಹೊಸದಾಗಿ ಸೃಜಿಸಿರುವ ೧೦೦ ಕೈಗಾರಿಕಾ ತರಬೇತಿ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳೆಷ್ಟು ; (ಹುದ್ದೆವಾರು ವಿವರ ನೀಡುವುದು)

(ಇ) ಒಬ್ಬ ಪ್ರಾಂಶುಪಾಲರಿಗೆ ಎರಡು ಮೂರು ಕೈಗಾರಿಕಾ ತರಬೇತಿ ಸಂಸ್ಥೆಗಳ ಪ್ರಭಾರ ವಹಿಸಿರುವುದು ನಿಜವೇ ; ಪ್ರಾಂಶುಪಾಲರಿಲ್ಲದೆ ಹಲವಾರು ಸಂಸ್ಥೆಗಳು ಕಿರಿಯ/ಹಿರಿಯ ತರಬೇತಿ ಅಧಿಕಾರಿಗಳು ಪ್ರಾಂಶುಪಾಲರ ಪ್ರಭಾರ ನಿರ್ವಹಿಸುತ್ತಿರುವುದು ನಿಜವೇ ;

(ಈ) ಹಾಗಿದ್ದಲ್ಲಿ, ಇಲಾಖೆಯಲ್ಲಿ ಒಟ್ಟು ಮಂಜೂರಾದ ಹುದ್ದೆಗಳೆಷ್ಟು ; ಹಾಲಿ ಕರ್ತವ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳೆಷ್ಟು ; ಖಾಲಿ ಇರುವ ಹುದ್ದೆಗಳೆಷ್ಟು ; (ವೃಂದವಾರು ಎಲ್ಲಾ ಸಿಬ್ಬಂದಿಗಳ ವಿವರ ನೀಡುವುದು)

(ಉ) ಬೆಳಗಾವಿ ಜಿಲ್ಲೆಯಲ್ಲಿ ಒಟ್ಟು ಎಷ್ಟು ಕೈಗಾರಿಕಾ ತರಬೇತಿ ಸಂಸ್ಥೆಗಳಿವೆ ; (ಅವುಗಳ ಸಿಬ್ಬಂದಿಗಳ ವಿವರ ನೀಡುವುದು)

(ಊ) ಹೊಸದಾಗಿ ಸೃಜಿಸಿರುವ ೧೦೦ ಕೈಗಾರಿಕಾ ಸಂಸ್ಥೆಗಳಿಗೆ ಮಂಜೂರಾದ ಅಗತ್ಯ ಸಿಬ್ಬಂದಿಗಳ ಸಂಖ್ಯೆ ಎಷ್ಟು ; ಅಗತ್ಯ ಕಛೇರಿ ಸಿಬ್ಬಂದಿಗಳಿಲ್ಲದೆ ದೈನಂದಿನ ಕಛೇರಿ ಕೆಲಸಗಳು ಕುಂಠಿತವಾಗಿರುವುದು ನಿಜವೇ ; ಹಾಗಿದ್ದಲ್ಲಿ, ಖಾಲಿ ಇರುವ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು ?

## ಖಾಲಿ ಇರುವ ಗ್ರೂಪ್ 'ಎ' ಮತ್ತು 'ಬಿ' ಹುದ್ದೆ ಭರ್ತಿ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ )** –

೭೦ (೪೯೪) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಖಾಲಿ ಇರುವ 'ಎ' ಮತ್ತು 'ಬಿ' ಗ್ರೂಪ್ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ೨೦೧೪ರ ಗೆಜೆಟೆಡ್ ಪ್ರೊಬೇಷನರ್ ಹುದ್ದೆಯ ಪ್ರಕ್ರಿಯೆ ಯಾವ ಹಂತದಲ್ಲಿದೆ ; ನೇಮಕಾತಿ ಪ್ರಕ್ರಿಯೆಯನ್ನು ಮುಕ್ತಾಯಗೊಳಿಸಲಾಗುವುದು ಯಾವಾಗ ; ಖಾಲಿ ಹುದ್ದೆ ಭರ್ತಿಗೆ ಹೊಸ ನೇಮಕಾತಿಯನ್ನು ಯಾವಾಗ ಪ್ರಾರಂಭಿಸಲಾಗುವುದು ;

(ಇ) ಕೇಂದ್ರ ಲೋಕಸೇವಾ ಆಯೋಗದ ಮಾದರಿಯಂತೆ, ರಾಜ್ಯ ಲೋಕಸೇವಾ ಆಯೋಗವೂ ಸಹ ಗೆಜೆಟೆಡ್ ಪ್ರೊಬೇಷನರ್ ಹುದ್ದೆಯ ನೇಮಕಾತಿ ಪ್ರಕ್ರಿಯೆಯ ವಾರ್ಷಿಕ ವೇಳಾ ಪಟ್ಟಿಯನ್ನು ಮುಂಚಿತವಾಗಿ ಪ್ರಕಟಿಸಿ, ಕಾಲಮಿತಿಯಲ್ಲಿ ಮುಗಿಸಲು ಇರುವ ತೊಡಕುಗಳೇನು ;

(ಈ) ಪಿ.ಸಿ.ಹೋಟಾ ಸಮಿತಿಯ ಶಿಫಾರಸ್ಸುಗಳೇನು ; ಈವರೆಗೆ ಯಾವ-ಯಾವ ಶಿಫಾರಸ್ಸುಗಳನ್ನು ಅಳವಡಿಸಲಾಗಿದೆ ; ಉಳಿದ ಶಿಫಾರಸ್ಸುಗಳನ್ನು ಅಳವಡಿಸಿಕೊಂಡು ಕೆ.ಪಿ.ಎಸ್.ಸಿ.ಯಲ್ಲಿ ಪಾರದರ್ಶಕತೆ ತರಲು ಸರ್ಕಾರಕ್ಕಿರುವ ತೊಡಕುಗಳೇನು ?

## ಮಲ್ಟಿಪ್ಲೆಕ್ಸ್‌ಗಳಲ್ಲಿ ಎಳನೀರು ಮಾರಾಟದ ಬಗ್ಗೆ

**ಶ್ರೀ ಪ್ರಾಣೇಶ್ ಎಂ.ಕೆ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೭೦ (೫೯೪) ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯದಲ್ಲಿ ಮಲ್ಟಿಪ್ಲೆಕ್ಸ್ ಮತ್ತು ಚಲನಚಿತ್ರ ಮಂದಿರಗಳಲ್ಲಿ ಎಳನೀರು ಮಾರಾಟ ಮಾಡಲು ಅವಕಾಶ ಕಲ್ಪಿಸುವ ವಿಚಾರ ಸರ್ಕಾರದ ಮುಂದಿದೆಯೇ ;

(ಆ) ಮಲ್ಟಿಪ್ಲೆಕ್ಸ್ ಮತ್ತು ಚಲನಚಿತ್ರ ಮಂದಿರಗಳಲ್ಲಿ ಕೂಲ್ ಡ್ರಿಂಕ್ಸ್ ಮಾರಾಟ ರದ್ದುಪಡಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ರೈತರಿಗೆ ಉತ್ತೇಜನ ನೀಡಲು ಮಲ್ಟಿಪ್ಲೆಕ್ಸ್ ಮತ್ತು ಚಲನಚಿತ್ರ ಮಂದಿರಗಳಲ್ಲಿ ಕಡ್ಡಾಯವಾಗಿ ಕೂಲ್ ಡ್ರಿಂಕ್ಸ್ ಬದಲು ಎಳನೀರು ಮಾರಲು ಅವಕಾಶ ಕಲ್ಪಿಸಿ ಆದೇಶ ಹೊರಡಿಸಲಾಗಿದೆಯೇ ; (ವಿವರಣೆ ನೀಡುವುದು)

(ಈ) ಮಲ್ಟಿಪ್ಲೆಕ್ಸ್ ಮತ್ತು ಚಲನಚಿತ್ರ ಮಂದಿರಗಳಲ್ಲಿ ಕೂಲ್ ಡ್ರಿಂಕ್ಸ್ ಮಾರಾಟ ರದ್ದುಪಡಿಸಲು ಇರುವ ತೊಂದರೆಗಳೇನು ; ರೈತರಿಗೆ ಈ ವಿಚಾರವಾಗಿ ಅನುಕೂಲ ಮಾಡಿಕೊಡಲು ಹೊಸದಾಗಿ ಆದೇಶ ಹೊರಡಿಸಲು ಸರ್ಕಾರಕ್ಕೆ ಇರುವ ತೊಂದರೆಗಳೇನು ? (ವಿವರ ನೀಡುವುದು)

## ಬೆಳಗಾವಿ ಜಿಲ್ಲೆಯ ರಾಯಭಾಗ ಪಟ್ಟಣಕ್ಕೆ ಕುಡಿಯುವ ನೀರಿನ ಯೋಜನೆ ಕುರಿತು

**ಶ್ರೀ ವಿವೇಕರಾವ್ ವಸಂತರಾವ್ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೭೨ (೫೫೯) ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೧೦–೧೧ನೇ ಸಾಲಿನಲ್ಲಿ ಪ್ರಾರಂಭವಾಗಿರುವ ಬೆಳಗಾವಿ ಜಿಲ್ಲೆಯ ರಾಯಭಾಗ ಪಟ್ಟಣಕ್ಕೆ ಕೃಷ್ಣಾ ನದಿಯಿಂದ ಕುಡಿಯುವ ನೀರಿನ ಯೋಜನೆಯ ಕಾಮಗಾರಿಯನ್ನು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯವರು ಕಾಮಗಾರಿ ಅನುಷ್ಠಾನಗೊಳಿಸಲು ವಿಳಂಬವಾಗಿರಲು ಕಾರಣವೇನು ; ಮರು ಸರ್ವೆ ಕಾರ್ಯ ಪೂರ್ಣಗೊಂಡಿದೆಯೇ ; (ವಿವರ ನೀಡುವುದು)

(ಆ) ಬೆಳಗಾವಿ ಜಿಲ್ಲೆಯ ರಾಯಭಾಗ ಪಟ್ಟಣಕ್ಕೆ ಕೃಷ್ಣಾ ನದಿಯಿಂದ ಕುಡಿಯುವ ನೀರನ್ನು ಒದಗಿಸಲು ಉದ್ದೇಶಿಸಿ ಪ್ರಾರಂಭಿಸಿರುವ ಯೋಜನೆ ಯಾವ ಹಂತದಲ್ಲಿರುತ್ತದೆ ;

(ಇ) ಈಗಿನ ಅಂದಾಜು ವೆಚ್ಚವೆಷ್ಟು ; ಆಡಳಿತಾತ್ಮಕ ಮಂಜೂರಾತಿ ದೊರೆತಿದೆಯೇ ; ಕಾಮಗಾರಿಯನ್ನು ಯಾವ ಕಾಲಮಿತಿಯೊಳಗೆ ಪ್ರಾರಂಭಿಸಲಾಗುವುದು ? (ವಿವರ ನೀಡುವುದು)

## ಮಾದಕ ವಸ್ತುಗಳ ಮಾರಾಟ ಮತ್ತು ಪ್ರಕರಣಗಳ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು ) –**

೬೩ (೫೧೭) ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಇತ್ತೀಚೆಗೆ ರಾಜಧಾನಿ ಬೆಂಗಳೂರಿನ ಶೈಕ್ಷಣಿಕ ಕೇಂದ್ರಗಳ ಸುತ್ತಮುತ್ತಲ ಪ್ರದೇಶಗಳಲ್ಲಿ ಸುಲಭವಾಗಿ ಗಾಂಜಾ ಹಾಗೂ ಇತರೆ ಮಾದಕ ವಸ್ತುಗಳನ್ನು ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ೨೦೧೫ರಿಂದ ಇದುವರೆವಿಗೂ ಇಂತಹ ಎಷ್ಟು ಪ್ರಕರಣಗಳಲ್ಲಿ ಯಾರು ಯಾರನ್ನು ಬಂಧಿಸಲಾಗಿದೆ ; ಅವರ ವಿರುದ್ಧ ತೆಗೆದುಕೊಂಡಿರುವ ಕ್ರಮಗಳೇನು ;

(ಇ) ಯಾವ ಪೊಲೀಸ್ ಠಾಣೆ ವ್ಯಾಪ್ತಿಗಳಲ್ಲಿ ಅತಿ ಹೆಚ್ಚು ಪ್ರಕರಣಗಳು ಬೆಳಕಿಗೆ ಬಂದಿವೆ ;

(ಈ) ಬೆಂಗಳೂರಿನಲ್ಲಿ ಅಕ್ರಮವಾಗಿ ನೆಲೆಸಿರುವ "ನೈಜೀರಿಯ" ಗ್ಯಾಂಗ್‌ಗಳು ಡ್ರಗ್ಸ್ ಮಾಫಿಯಾ, ವೇಶ್ಯಾವಾಟಿಕೆ, ಸೈಬರ್ ಕ್ರೈಂನಂತಹ ಚಟುವಟಿಕೆಗಳಿಗೆ ವಿದ್ಯಾರ್ಥಿಗಳ ಮೂಲಕ ದಂಧೆ ನಡೆಸುತ್ತಿರುವ ಅಕ್ರಮ ವಲಸಿಗರ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಈವರೆವಿಗೂ ದಾಖಲಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು ; ಆಪಾದಿತರ ವಿರುದ್ಧ ತೆಗೆದುಕೊಂಡಿರುವ ಕ್ರಮವೇನು ?

## ಶಾಶ್ವತ ಕುಡಿಯುವ ನೀರಿನ ಕಾಮಗಾರಿಗಳ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೬೪ (೫೩೩) ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಬೀದರ್ ಜಿಲ್ಲೆ, ಔರಾದ್ ನಗರ ಸೇರಿ ಹಾಲಹಳ್ಳಿಯಲ್ಲಿ ಕರ್ನಾಟಕ ನೀರು ಸರಬರಾಜು ಮಂಡಳಿಯಿಂದ ಶಾಶ್ವತ ಕುಡಿಯುವ ನೀರಿನ ಕಾಮಗಾರಿಗೆ ಹಣ ಬಿಡುಗಡೆಯಾಗಿದ್ದರೂ, ಕಾಮಗಾರಿ ಪೂರ್ಣಗೊಳ್ಳದಿರಲು ಕಾರಣವೇನು ;

(ಆ) ಈ ಕಾಮಗಾರಿಯು ಪ್ರಾರಂಭಗೊಂಡಿದ್ದು ಯಾವಾಗ ; ಪ್ರಸ್ತುತ ಕಾಮಗಾರಿಗಳ ಪ್ರಗತಿ ಯಾವ ಹಂತದಲ್ಲಿದೆ ; ಈ ಕಾಮಗಾರಿಗಳನ್ನು ಪೂರ್ಣಗೊಳಿಸಲು ಬೇಕಾಗುವ ಕಾಲಮಿತಿ ಎಷ್ಟು ;

(ಇ) ಸದರಿ ಕಾಮಗಾರಿಗೆ ಬಿಡುಗಡೆಯಾಗಿರುವ ಅನುದಾನವೆಷ್ಟು ; ಆ ಪೈಕಿ ಖರ್ಚಾದ ಅನುದಾನವೆಷ್ಟು ? (ಕಾಮಗಾರಿವಾರು ಕಳೆದ ೪ ವರ್ಷಗಳ ವಿವರ ನೀಡುವುದು)

## ಪ್ರಿಯದರ್ಶಿನಿ ಯೋಜನೆಯಡಿ ಮಹಿಳೆಯರ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು)** –

೭೫ (೫೮೬) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಪ್ರಿಯದರ್ಶಿನಿ ಯೋಜನೆಯಡಿ ಈವರೆಗೆ ಎಷ್ಟು ಮಹಿಳೆಯರನ್ನು ವಿವಿಧ ಸಹಕಾರ ಸಂಘಗಳಲ್ಲಿ ಸದಸ್ಯರನ್ನಾಗಿ ಮಾಡಿಕೊಳ್ಳಲು ಸರ್ಕಾರ ಅನುದಾನವನ್ನು ನೀಡಿದೆ ;

(ಆ) ಮಾಹಿತಿ ಕೊರತೆಯಿಂದ ಮಹಿಳೆಯರು ಸಹಕಾರ ಚಳುವಳಿಗಳಲ್ಲಿ ಹೆಚ್ಚಾಗಿ ತೊಡಗಿಸಿಕೊಳ್ಳಲು ಸಾಧ್ಯವಾಗದೆ, ಸರ್ಕಾರದ ಪ್ರಿಯದರ್ಶಿನಿ ಯೋಜನೆಯ ಲಾಭವನ್ನು ಪಡೆಯಲು ಸಾಧ್ಯವಾಗುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ?

**ಶ್ರೀನಿವಾಸ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಕಾ.ಸೂ. 1100 ಪ್ರತಿಗಳು 1500 – ಪಿ2